ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:03:ಯೋಜನೆ:2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:28-07-2017

## ಚಾಲನಾ ಆದೇಶ

ವಿಷಯ: 2017-18ನೇ ಸಾಲಿನಲ್ಲಿ ರಾಜ್ಯದಲ್ಲಿ ಶೈಕ್ಷಣಿಕವಾಗಿ ಹಿಂದುಳಿದ ಜಿಲ್ಲೆಗಳಲ್ಲಿ 10 ಮಾದರಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಆವಾಸೀ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ.
ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಇಡಿ/56/ಹೆಚ್‌ಪಿಸಿ/2017, ದಿ:19.07.2017

--*--

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾಲೇಜು ಶಿಕ್ಷಣ ಇಲಾಖೆಯಡಿಯಲ್ಲಿ 2017-18ನೇ ಸಾಲಿನಲ್ಲಿ ರಾಜ್ಯದಲ್ಲಿ ಶೈಕ್ಷಣಿಕವಾಗಿ ಹಿಂದುಳಿದ ಜಿಲ್ಲೆಗಳಲ್ಲಿ 10 ಮಾದರಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಆವಾಸೀ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಸ್ಥಾಪಿಸಲು ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುವುದರಿಂದ, ಉಲ್ಲೇಖಿತ ಸರ್ಕಾರಿ ಆದೇಶವನ್ನು ಈ ಪತ್ರದೊಂದಿಗೆ ಲಗತ್ತಿಸಿ ಈ ಕೆಳಕಂಡವರ ಅವಗಾಹನೆ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ,

1. ಕಾರ್ಯಪಾಲಕ ಅಭಿಯಂತರರು, ತಾಂತ್ರಿಕ ಕೋಶ – ತಮ್ಮ ವಿಭಾಗಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.
2. ವ್ಯವಸ್ಥಾಪಕರು/ಅಧೀಕ್ಷಕರು, ವರ್ಗಾವಣೆ ಮತ್ತು ನಿಯೋಜನೆ ವಿಭಾಗ – ತಮ್ಮ ವಿಭಾಗಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.
3. ವ್ಯವಸ್ಥಾಪಕರು/ಅಧೀಕ್ಷಕರು, ನೇಮಕಾತಿ ವಿಭಾಗ – ತಮ್ಮ ವಿಭಾಗಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.
4. ವ್ಯವಸ್ಥಾಪಕರು/ಅಧೀಕ್ಷಕರು, ಆಯವ್ಯಯ ವಿಭಾಗ – ತಮ್ಮ ವಿಭಾಗಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.
5. ವ್ಯವಸ್ಥಾಪಕರು/ಅಧೀಕ್ಷಕರು, ಶೈಕ್ಷಣಿಕ ವಿಭಾಗ – ತಮ್ಮ ವಿಭಾಗಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.
6. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

ಪ್ರತಿ ರವಾನೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ, ಕಾಲೇಜು ಶಿಕ್ಷಣ ಇಲಾಖೆ.
4. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳ ಆಪ್ತ ಸಹಾಯಕರುಗಳಿಗೆ.
5. ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ವ್ಯವಸ್ಥಾಪಕರು/ಅಧೀಕ್ಷಕರುಗಳಿಗೆ.

Plan_03_2017-18_Bud.speech

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2017-18ನೇ ಸಾಲಿನಲ್ಲಿ ರಾಜ್ಯದಲ್ಲಿ ಶೈಕ್ಷಣಿಕವಾಗಿ ಹಿಂದುಳಿದ ಜಿಲ್ಲೆಗಳಲ್ಲಿ 10 ಮಾದರಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಆವಾಸೀ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ.

ಓದಲಾಗಿದೆ:
(1) 2017-18ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 105.
(2) ಸರ್ಕಾರದ ಆದೇಶ ಸಂಖ್ಯೆ: ಇಡಿ 56 ಹೆಚ್‌ಪಿಸಿ 2017 (ಭಾ-1) ದಿ: 17.05.2017.
(3) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಕಾಶಿಇ/03/ಯೋಜನೆ/2017-18 ದಿ: 07.04.2017.
(4) ಸರ್ಕಾರದ ಆದೇಶ ಸಂಖ್ಯೆ: ಇಡಿ 56 ಹೆಚ್‌ಪಿಸಿ 2017 (ಭಾ-1) ದಿ: 15.07.2017.

***

ಪ್ರಸ್ತಾವನೆ:

2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 105 ರಲ್ಲಿ ಮಾನ್ಯ ಮುಖ್ಯ ಮಂತ್ರಿಯವರು 'ಹೆಣ್ಣು ಮಕ್ಕಳ ಮತ್ತು ಗಂಡು ಮಕ್ಕಳ ಹಾಸ್ಟೆಲ್‌ಗಳೊಂದಿಗೆ 10 ಮಾದರಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಸ್ಥಾಪಿಸಲಾಗುವುದು' ಎಂದು ಘೋಷಿಸಿರುತ್ತಾರೆ.

ಮೇಲೆ (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ 10 ಮಾದರಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಸರ್ಕಾರಿ ವಸತಿಯುಕ್ತ ಪ್ರಥಮ ದರ್ಜೆ ಕಾಲೇಜುಗಳನ್ನು ಸ್ಥಾಪಿಸುವ ಸಂಬಂಧ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿಯನ್ನು ನೀಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ.

ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರು ಆವಾಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾರಂಭಕ್ಕೆ ತಗಲುವ ವೆಚ್ಚ, ಪುರುಷ ಮತ್ತು ಮಹಿಳಾ ವಸತಿನಿಲಯ ನಿರ್ಮಾಣಕ್ಕೆ ಮತ್ತು ಸಿಬ್ಬಂದಿ ನೇಮಕಾತಿಗೆ ತಗಲುವ ವೆಚ್ಚಕ್ಕೆ ಮಾಹಿತಿಯೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ (4) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು 10 ಜಿಲ್ಲೆಗಳಲ್ಲಿ ಜಮೀನು ಗುರುತಿಸುವ ಸಂಬಂಧ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸಂಬಂಧಿತ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ.

ದಿನಾಂಕ 12.07.2017ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಪ್ರತಿ ಕಾಲೇಜಿಗೆ ತಲಾ ರೂ.25.00 ಕೋಟಿಯ ದರದಂತೆ ಹತ್ತು ಕಾಲೇಜುಗಳಿಗೆ ರೂ.250.00 ಕೋಟಿಗಳ ಅನಾವರ್ತಕ ವೆಚ್ಚದಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಹತ್ತು ಮಾದರಿ ಆವಾಸೀ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ ಹಾಗೂ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಲಭ್ಯವಿರುವ ರೂ.82.86 ಕೋಟಿಗಳನ್ನು ಬಳಸಿಕೊಳ್ಳಲು ಸಚಿವ ಸಂಪುಟವು ಅನುಮೋದನೆ ನೀಡಿರುತ್ತದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿರುತ್ತದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 56 ಹೆಚ್‌ಪಿಸಿ 2017**
**ಬೆಂಗಳೂರು, ದಿನಾಂಕ:19-07-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2017-18ನೇ ಸಾಲಿನಲ್ಲಿ ರಾಜ್ಯದಲ್ಲಿ ಹೆಣ್ಣು ಮಕ್ಕಳ ಮತ್ತು ಗಂಡು ಮಕ್ಕಳ ಹಾಸ್ಟೆಲ್‌ಗಳೊಂದಿಗೆ 10 ಮಾದರಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರತಿ ಕಾಲೇಜಿಗೆ ತಲಾ ರೂ.25.00 ಕೋಟಿಗಳ ದರದಂತೆ ಒಟ್ಟು ರೂ.250.00 ಕೋಟಿಗಳ ವೆಚ್ಚದಲ್ಲಿ ಈ ಕೆಳಗಿನ ಜಿಲ್ಲೆಗಳಲ್ಲಿ ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

| ಕ್ರ ಸಂ | ಜಿಲ್ಲೆಗಳು |
|---|---|
| 1 | ಕೋಲಾರ |

| | |
|---|---|
| 2 | ಚಿತ್ರದುರ್ಗ |
| 3 | ಹಾವೇರಿ |
| 4 | ಚಾಮರಾಜನಗರ |
| 5 | ಕಲಬುರ್ಗಿ |
| 6 | ರಾಯಚೂರು |
| 7 | ವಿಜಯಪುರ |
| 8 | ಯಾದಗಿರಿ |
| 9 | ಕೊಪ್ಪಳ |
| 10 | ಬೀದರ್ |

ಈ ರೀತಿ ಪ್ರಾರಂಭಿಸಲಾಗುವ ಆವಾಸೀ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ ಕಾಮಗಾರಿಗಳಿಗೆ ಅಗತ್ಯವಿರುವ ಅನಾವರ್ತಕ ವೆಚ್ಚಕ್ಕಾಗಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಲಭ್ಯವಿರುವ ಈ ಕೆಳಕಂಡ ಅನುದಾನವನ್ನು ಬಳಸಿಕೊಳ್ಳುವುದು.

(1) 2017-18ನೇ ಸಾಲಿನಲ್ಲಿ ಎಸ್.ಸಿ.ಪಿ / ಟಿ.ಎಸ್.ಪಿ ಯೋಜನೆಯಡಿ ಆಯವ್ಯಯ ಲೆಕ್ಕ ಶೀರ್ಷಿಕೆ 4202-01-203-1-01-ಉಪ ಲೆಕ್ಕ ಶೀರ್ಷಿಕೆ 422 ರಡಿ ಒದಗಿಸಿರುವ ರೂ.8.05 ಕೋಟಿ ಮತ್ತು 423ರಡಿ ಒದಗಿಸಿರುವ ರೂ.2.02 ಕೋಟಿಗಳು ಒಟ್ಟು ರೂ.10.07 ಕೋಟಿಗಳು.

(2) ಆಯವ್ಯಯ ಲೆಕ್ಕ ಶೀರ್ಷಿಕೆ 2202-03-001-0-02 ಉಪ ಲೆಕ್ಕ ಶೀರ್ಷಿಕೆ 422 ಮತ್ತು 423 ರಡಿ 2014-15ನೇ ಸಾಲಿನಲ್ಲಿ ಒದಗಿಸಲ್ಪಟ್ಟು ಬಳಕೆಯಾಗದ ಮತ್ತು 2016-17ನೇ ಸಾಲಿನಲ್ಲಿ ಲ್ಯಾಪ್‌ಟಾಪ್ ಖರೀದಿಗೆ ಪುನ: ಒದಗಿಸಲಾಗಿರುವ ಎಸ್.ಸಿ.ಪಿ / ಟಿ.ಎಸ್.ಪಿ ಅನುದಾನದಲ್ಲಿ ಉಳಿಕೆಯಾದ ಅನುದಾನ ರೂ.36.00 ಕೋಟಿಗಳು ಮತ್ತು

(3) 2015-16 ರಲ್ಲಿ ಒದಗಿಸಲ್ಪಟ್ಟು ಬಳಕೆಯಾಗದ ಮತ್ತು 2017-18ನೇ ಸಾಲಿಗೆ ಆಯವ್ಯಯ ಲೆಕ್ಕ ಶೀರ್ಷಿಕೆ 2202-03-001-0-02-422/423 ರಡಿ ಒದಗಿಸಿರುವ ರೂ.36.22 ಕೋಟಿಗಳು ಮತ್ತು ಲೆಕ್ಕ ಶೀರ್ಷಿಕೆ 4202-01-203-0-01-422/423 ರಡಿ ಒದಗಿಸಿರುವ ಅನುದಾನ ರೂ.0.57 ಕೋಟಿಗಳು ಒಟ್ಟು ರೂ.36.79 ಕೋಟಿಗಳು.

ಮೇಲಿನಂತೆ ಒಟ್ಟು ರೂ.82.86 ಕೋಟಿಗಳ ಅನುದಾನವನ್ನು ಕಾಲೇಜು ಪ್ರಾರಂಭಿಸಲು ಅಗತ್ಯವಿರುವ ಒಟ್ಟು ಅನಾವರ್ತಕ ಅಂದಾಜು ಮೊತ್ತ ರೂ.250.00 ಕೋಟಿಗಳ 1/3ನೇ ಭಾಗವೆಂದು ಪರಿಗಣಿಸುವುದು.

**ಷರತ್ತುಗಳು:-**

1. ಉಳಿದ ರೂ.167.14 ಕೋಟಿಗಳ ಅನುದಾನಕ್ಕೆ ಕಾಮಗಾರಿಯ ಪ್ರಗತಿಯ ಆಧಾರದ ಮೇಲೆ 2018-19 ಹಾಗೂ 2019-20ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲು ಸರ್ಕಾರಕ್ಕೆ ಪ್ರತ್ಯೇಕ ಪ್ರಸ್ತಾವನೆಯನ್ನು ಸಲ್ಲಿಸುವುದು.
2. ಆವರ್ತಕ ಅನುದಾನಕ್ಕಾಗಿ ವೇತನ ಮತ್ತು ವೇತನೇತರ ವೆಚ್ಚಗಳಿಗೆ ಸರ್ಕಾರಕ್ಕೆ ಪ್ರತ್ಯೇಕ ಪ್ರಸ್ತಾವನೆಯನ್ನು ಸಲ್ಲಿಸುವುದು.
3. ಈ ರೀತಿ ಪ್ರಾರಂಭಿಸಲಾಗುತ್ತಿರುವ ಆವಾಸೀ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿಜ್ಞಾನ, ವಾಣಿಜ್ಯ ಮತ್ತು ಕಲಾ ವಿಭಾಗಗಳಲ್ಲಿ ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಪಠ್ಯಕ್ರಮಕ್ಕೆ ಅನುಸಾರವಾಗಿ ತಲಾ ಒಂದು ವಿಷಯ ಸಂಯೋಜನೆಯ ಪದವಿ ಕೋರ್ಸನ್ನು ಈ ಕೆಳಕಂಡಂತೆ ಒದಗಿಸುವುದು.

    ಅ) ಬಿ.ಎ – ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ (ಹೆಚ್.ಪಿ.ಇ)

    ಆ) ಬಿ.ಎಸ್ಸಿ – ಭೌತಶಾಸ್ತ್ರ, ಗಣಿತಶಾಸ್ತ್ರ, ಕಂಪ್ಯೂಟರ್ ಸೈನ್ಸ್ (ಪಿ.ಎಂ.ಸಿಎಸ್)

    ಇ) ಬಿ.ಕಾಂ ವಿಶ್ವವಿದ್ಯಾಲಯಗಳು ನಿಗದಿಪಡಿಸಿಯುವ ವಾಣಿಜ್ಯ ವಿಷಯಗಳು

4. ಈ ಕಾಲೇಜುಗಳಲ್ಲಿ ಪ್ರತಿ ತರಗತಿಗೆ 40 ವಿದ್ಯಾರ್ಥಿಗಳಂತೆ, ಪ್ರತಿ ಕಾಲೇಜಿನ ಒಟ್ಟು ವಿದ್ಯಾರ್ಥಿ ಪ್ರವೇಶಾತಿ ಸಂಖ್ಯೆಯನ್ನು 120 ವಿದ್ಯಾರ್ಥಿಗಳಿಗೆ ಮಿತಿಗೊಳಿಸುವುದು.

5. ಎಲ್ಲಾ ವರ್ಗಗಳ ವಿದ್ಯಾರ್ಥಿಗಳಿಗೆ ಸಮಾನ ಅವಕಾಶಗಳನ್ನು ಕಲ್ಪಿಸುವ ದೃಷ್ಟಿಯಿಂದ ಶೇಕಡಾ 60% ಸೀಟುಗಳನ್ನು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಾಗೂ ಉಳಿದ 40% ಸೀಟುಗಳನ್ನು ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಮೀಸಲಿರಿಸುವುದು. ನಿರೀಕ್ಷಿತ ಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪ್ರವೇಶಾತಿ ಮೀಸಲಾತಿಯನ್ನು ಬಳಸಿಕೊಳ್ಳದಿದ್ದಲ್ಲಿ, ಆ ಸಂಖ್ಯೆಯ ಸೀಟುಗಳನ್ನು ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಒದಗಿಸಲು ಮೀಸಲಾತಿಯಲ್ಲಿ ಸಡಿಲಿಕೆಯನ್ನು ತರತಕ್ಕದ್ದು.
6. ಈ ಕಾಲೇಜುಗಳಲ್ಲಿ ವಿದ್ಯಾರ್ಥಿನಿಯರು ಹಾಗೂ ವಿದ್ಯಾರ್ಥಿಗಳ ಪ್ರವೇಶಾತಿ ಅನುಪಾತವನ್ನು 35 : 65 ಕ್ಕೆ ನಿಗದಿಪಡಿಸಿಕೊಳ್ಳುವುದು. ಒಂದು ವೇಳೆ ನಿರೀಕ್ಷಿತ ಸಂಖ್ಯೆಯಲ್ಲಿ ವಿದ್ಯಾರ್ಥಿನಿಯರು ಪ್ರವೇಶಾತಿಯಲ್ಲಿ ಮೀಸಲಾತಿ ಸೌಲಭ್ಯವನ್ನು ಬಳಸಿಕೊಳ್ಳದಿದ್ದಲ್ಲಿ, ಆ ಸಂಖ್ಯೆಗೆ ಅನುಗುಣವಾಗಿ ಮೀಸಲಾತಿಯಲ್ಲಿ ಸಡಿಲಿಕೆ ತರತಕ್ಕದ್ದು.
7. 360 ವಿದ್ಯಾರ್ಥಿಗಳ ವಸತಿಗೆ ಅನುಕೂಲವಾಗುವಂತೆ ವಿದ್ಯಾರ್ಥಿಗಳ ವಸತಿಗೆ ಅನುಕೂಲವಾಗುವಂತೆ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು.
8. ಹೀಗೆ ಸ್ಥಾಪಿಸಲಾಗುವ ಪ್ರತಿ ಆವಾಸೀ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಅಗತ್ಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಹುದ್ದೆಯನ್ನು ಸೃಜಿಸಲು ಮತ್ತು ಕಾಲೇಜುಗಳ ವಿದ್ಯಾರ್ಥಿನಿಲಯಕ್ಕೆ ಅಗತ್ಯವಿರುವ ಹುದ್ದೆಗಳನ್ನು ಸೃಜಿಸಲು ಪ್ರತ್ಯೇಕವಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು.
9. ಪ್ರತಿ ಆವಾಸೀ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸುವ ಮೊದಲು ಕಟ್ಟಡ ಕಾಮಗಾರಿಯ ವಿವರವಾದ ಅಂದಾಜು ಪಟ್ಟಿ ಮತ್ತು ನೀಲಿನಕ್ಷೆಯನ್ನು ಸರ್ಕಾರದ ಅನುಮೋದನೆಗಾಗಿ ಸಲ್ಲಿಸುವುದು.
10. ಕಟ್ಟಡ ಕಾಮಗಾರಿಗಳನ್ನು ಗುತ್ತಿಗೆದಾರರಿಗೆ ವಹಿಸುವ ಮೊದಲು ಕೆ.ಟಿ.ಪಿ.ಪಿ ಅಧಿನಿಯಮ 1999 ಮತ್ತು ಅಧ್ಯಾದೇಶ-2000 ದಲ್ಲಿ ತಿಳಿಸಿರುವ ಎಲ್ಲಾ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್.ಡಿ 406 ಇಎಕ್ಸ್‌ಪಿ-8 2017 ದಿ: 16.06.2017 ಹಾಗೂ ಟಿಪ್ಪಣಿ ಸಂಖ್ಯೆ: ಆಇ 467 ವೆಚ್ಚ-8 2017 ದಿ: 29.06.2017 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ
19/7

(ಅಪರ್ಣಾ ಪಾವಟೆ)
ಸರ್ಕಾರದ ಉಪ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ಯೋಜನೆ)

ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ (ಆಡಿಟ್ 1 ಮತ್ತು 2), ಬೆಂಗಳೂರು.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
6. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
7. ನಿರ್ದೇಶಕರು, ಪಿ.ಎಂ.ಐ ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ).
9. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ (ಪ್ರಕರಣ ಸಂಖ್ಯೆ: ಸಿ:487/2017)
10. ಸಮನ್ವಯಾಧಿಕಾರಿಗಳು, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ.
11. ಹೆಚ್ಚುವರಿ ಪ್ರತಿಗಳು.